# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆರಡನೆಯ ಅಧಿವೇಶನ

**ಕಾರ್ಯಕಲಾಪಗಳ ಪಟ್ಟಿ**

**ಸೋಮವಾರ, ದಿನಾಂಕ: 21ನೇ ನವೆಂಬರ್, 2016**
**(ಸಮಯ: ಬೆಳಗ್ಗೆ 11.00 ಗಂಟೆಗೆ)**

******

### 01. ಸಂತಾಪ ಸೂಚನೆ

### 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

### 03. ಕಾರ್ಯದರ್ಶಿಯವರ ವರದಿ

**ಕಾರ್ಯದರ್ಶಿಯವರು: –**

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯಲ್ಲಿ ಮಂಡಿಸುವುದು.

### 04. ವರದಿಗಳನ್ನೊಪ್ಪಿಸುವುದು

**ಅ) ಶ್ರೀ ರಾಮಚಂದ್ರಗೌಡ (ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು ಹಾಗೂ ಅಧ್ಯಕ್ಷರು, ಕರ್ನಾಟಕ ವಿಧಾನ ಪರಿಷತ್ತು ಮತ್ತು ವಿಧಾನ ಸಭೆಯ ಜಂಟಿ ನಿಯಮಾವಳಿ ಉಪ ಸಮಿತಿ)** ಅವರು 2016–2017ನೇ ಸಾಲಿನ ಕರ್ನಾಟಕ ವಿಧಾನ ಪರಿಷತ್ತು ಮತ್ತು ವಿಧಾನ ಸಭೆಯ ಜಂಟಿ ನಿಯಮಾವಳಿ ಸಮಿತಿಯ ಮಧ್ಯಂತರ ವರದಿಯನ್ನು ಒಪ್ಪಿಸುವುದು.

**ಆ) ಶ್ರೀ ವಿ.ಎಸ್. ಉಗ್ರಪ್ಪ (ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು ಹಾಗೂ ಅಧ್ಯಕ್ಷರು, ವಿಶೇಷ ಸದನ ಸಮಿತಿ)** ಅವರು ರಾಜ್ಯದಲ್ಲಿ ಭೋವಿ ಸಮುದಾಯದ ಜನರಿಗೆ ಪರಿಶಿಷ್ಟ ಜಾತಿ ಪ್ರಮಾಣ ಪತ್ರ ನೀಡದಿರುವುದರಿಂದ ಅವರು ಅನುಭವಿಸುತ್ತಿರುವ ತೊಂದರೆಗಳ ಬಗ್ಗೆ ಪರಿಶೀಲಿಸಲು ರಚಿಸಲಾದ ವಿಧಾನ ಪರಿಷತ್ತಿನ ವಿಶೇಷ ಸದನ ಸಮಿತಿಯ ವರದಿಯನ್ನು ಒಪ್ಪಿಸುವುದು.

**ಇ) ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ಸದಸ್ಯರು, ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ)** ಅವರು ಕರ್ನಾಟಕ ವಿಧಾನ ಮಂಡಲದ 2016–17ನೇ ಸಾಲಿನ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ಐದನೇ ವರದಿಯನ್ನು ಒಪ್ಪಿಸುವುದು.

..2

## ೦5. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ರಾಮಚಂದ್ರಗೌಡ ಅವರು** ಬೆಂಗಳೂರು ನಗರವು ಮಾದಕ ವಸ್ತುಗಳ ಮಾರಾಟ ಕೇಂದ್ರವಾಗಿ ಮಾರ್ಪಾಟಾಗುತ್ತಿರುವುದು ಆಘಾತಕಾರಿ ಅಂಶವಾಗಿದ್ದು ಈ ಜಾಲದಿಂದ ಮುಕ್ತಗೊಳಿಸಲು ಕಠಿಣ ಕ್ರಮ ತೆಗೆದುಕೊಳ್ಳುವ ವಿಷಯದ ಬಗ್ಗೆ **ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.**

**ಆ) ಶ್ರೀಯುತರುಗಳಾದ: ಬಸವರಾಜ ಹೊರಟ್ಟಿ ಹಾಗೂ ಎಂ.ಕೆ. ಪ್ರಾಣೇಶ್ ಅವರುಗಳು** ಉತ್ತರ ಕರ್ನಾಟಕದ ಧಾರವಾಡ, ಗದಗ ಹಾಗೂ ಬೆಳಗಾವಿ ಜಿಲ್ಲೆಗಳ ಗ್ರಾಮೀಣ ಪ್ರದೇಶಗಳಿಗೆ ಕುಡಿಯುವ ನೀರು ಪೂರೈಸುವ ದೃಷ್ಟಿಯಿಂದ ಕಳಸಾ–ಬಂಡೂರಿ ನಾಲಾ ಹಾಗೂ ಮಹದಾಯಿ ನದಿ ಜೋಡಣೆ ಯೋಜನೆಗಳನ್ನು ಕೈಗೆತ್ತಿಕೊಳ್ಳುವ ಬಗ್ಗೆ **ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.**

**ಇ) ಶ್ರೀ ಕೋಟ ಶ್ರೀನಿವಾಸ ಪೂಜಾರಿ ಅವರು** ಮುಖ್ಯಮಂತ್ರಿ ಪರಿಹಾರ ನಿಧಿಯಿಂದ ನೀಡುವ ವೈದ್ಯಕೀಯ ವೆಚ್ಚ ಮರುಪಾವತಿ ಮಾಡುವ ಯೋಜನೆಯನ್ನು ಸೀಮಿತಗೊಳಿಸಿ, ಆದೇಶ ಹೊರಡಿಸಿರುವುದರಿಂದ ಬಡವರಿಗೆ ತೊಂದರೆಯಾಗುತ್ತಿರುವ ಬಗ್ಗೆ **ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.**

## ೦6. ನಿಯಮ ೩೩೦ರ ಮೇರೆಗೆ

**ಅ) ಶ್ರೀ ಕೆ.ಸಿ.ಕೊಂಡಯ್ಯ ಅವರು** ರಾಜ್ಯದ ಪ್ರತಿ ಜಿಲ್ಲೆಗಳಲ್ಲಿರುವ ವೈದ್ಯಕೀಯ ಮಹಾವಿದ್ಯಾಲಯಗಳಿಗೆ ಕನಿಷ್ಠ ಇಬ್ಬರು ವಿಧಾನ ಪರಿಷತ್/ವಿಧಾನ ಸಭಾ ಸದಸ್ಯರುಗಳನ್ನು ಎರಡು ವರ್ಷಗಳ ಅವಧಿಗೆ ರೊಟೇಷನ್ ಮಾದರಿಯಲ್ಲಿ ನೇಮಕ ಮಾಡಬೇಕೆನ್ನುವ ವಿಷಯದ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು)**

**ಆ) ಶ್ರೀ ಅರುಣ ಶಹಾಪುರ ಅವರು** ಅನುದಾನಿತ ಐ.ಟಿ.ಐ. ಶಿಕ್ಷಣ ಸಂಸ್ಥೆಗಳು ಬೋಧನಾ ಶುಲ್ಕವನ್ನು ಸರ್ಕಾರಕ್ಕೆ ಜಮೆ ಮಾಡದ ಕಾರಣ ಕಾಲೇಜಿನ ಸಿಬ್ಬಂದಿ ವರ್ಗದವರ ವೇತನವನ್ನು ಜುಲೈ 2016 ರಿಂದ ತಡೆಹಿಡಿದಿರುವುದರಿಂದ ಶಿಕ್ಷಕರು ಸಂಕಷ್ಟಕ್ಕೆ ಸಿಲುಕಿರುವುದರಿಂದ ಕೂಡಲೇ ವೇತನ ಬಿಡುಗಡೆ ಮಾಡುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಕಾರ್ಮಿಕ ಸಚಿವರು)**

**ಶ್ರೀನಿವಾಸ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.

**www.kla.kar.nic.in/council.htm**